**ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ ದ ನ್ಯಾದಂ. ರವರ ನ್ಯಾಯಾಲಯ, ಪಿರಿಯಾಪಟ್ಟಣ.**

**ಸಿ.ಸಿ. ಸಂಃ 3788/2022**

| | | |
|---|---|---|
| ಸಾಕ್ಷಿಯ ಹೆಸರುಃ | ಹನುಮಂತರೆಡ್ಡಿ | ಪ್ರಾಸಾಃಃ 2 |
| ತಂದೆ ಹೆಸರುಃ | ಹನುಮಂತರೆಡ್ಡಿ | ಚಾಸಾಃಃ 2 |
| ವಯಸ್ಸುಃ | 80 ವರ್ಷ | ಪ್ರಮಾಣೀಕರಿಸಿದ<br>ದಿಃ 29/05/2025 |
| ಉದ್ಯೋಗಃ | ವ್ಯವಸಾಯ | |
| ವಾಸ ಸ್ಥಳಃ | ಸುರಗಳ್ಳಿ ಗ್ರಾಮ,<br>ಪಿರಿಯಾಪಟ್ಟಣ ತಾ. | |

**ಮುಖ್ಯ ವಿಚಾರಣೆಃ ಮಾನ್ಯ ಸಸಅ ರಿಂದಃ**

ನನಗೆ ಆರೋಪಿತ ಗೊತ್ತು. ನನಗೆ ಚಾಸಾ-1 ಗೊತ್ತು. ಈ ಪ್ರಕರಣದ ಬಗ್ಗೆ ಏನೂ ಗೊತ್ತಿಲ್ಲ. ನಾನು ಪೊಲೀಸರಿಗೆ ಹೇಳಿಕೆ ನೀಡಿಲ್ಲ.

(**ಈ ಸಮಯದಲ್ಲಿ ಸಹಾಯಕ ಸರ್ಕಾರಿ ಅಭಿಯೋಜಕರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿ ಕೋರುತ್ತಾರೆ. ಕಡತವನ್ನು ಪರಿಶೀಲಿಸಿ ಅನುಮತಿ ನೀಡಲಾಯಿತು.**)

**ಪಾಟೀ ಸವಾಲುಃ ಮಾನ್ಯ ಸಸಅ ರವರಿಂದಃ**

ಆರೋಪಿತ ಕಲ್ಲು ಗಣಿಗಾರಿಕೆ ನಡೆಸುತ್ತಿದ್ದರು ಎಂದರೆ ಸರಿ. ಆರೋಪಿತ ಚಾಸಾ-1 ರವರ ಹಿಟಾಚಿ ವಾಹನವನ್ನು ನಮ್ಮ ಮನೆಯ ಬಳಿ ನಿಲ್ಲಿಸಿದ್ದರು ಎಂದರೆ ಸರಿಯಲ್ಲ. ಚಾಸಾ-1 ರವರಿಗೆ ಮೈ ಹುಷಾರಿಲ್ಲದ ಕಾರಣ ಬೆಂಗಳೂರಿಗೆ ಹೋದಾಗ ಆರೋಪಿತ ಸದರಿ ಹಿಟಾಚಿ ವಾಹನವನ್ನು ಮಾರಾಟ ಮಾಡುವ ಸಲುವಾಗಿ 3-4 ಗುಜರಿ ವ್ಯಾಪಾರಸ್ಥರಿಗೆ ತೋರಿಸಿದರು ಎಂದರೆ ನನಗೆ ಗೊತ್ತಿಲ್ಲ. ಸದರಿ ಹಿಟಾಚಿ ವಾಹನವನ್ನು

ರೂ.2,40,000/–ಕ್ಕೆ ಮಾರಾಟ ಮಾಡಿ, ರೂ.1,65,000/–ನ್ನು ಸೋಮಣ್ಣ ಎಂಬುವವರಿಗೆ ನೀಡಿದ್ದರು ಎಂದರೆ ನನಗೆ ಗೊತ್ತಿಲ್ಲ. ಸೋಮಣ್ಣನವರಿಗೆ ರೂ.75,000/–ಕ್ಕೆ ಚೆಕ್ಕನ್ನು ನೀಡಿದ್ದರು ಎಂದರೆ ನನಗೆ ಗೊತ್ತಿಲ್ಲ. ರೂ.75,000/– ಚೆಕ್ಕನ್ನು ನೀಡುವಾಗ ಹಿಟಾಚಿ ವಾಹನವನ್ನು ತೆಗೆದುಕೊಂಡು ಹೋಗುತ್ತೇನೆಂದು ತಿಳಿಸಿದರು ಎಂದರೆ ನನಗೆ ಗೊತ್ತಿಲ್ಲ.

ದಿಃ13/09/2019 ರಂದು ಮಧ್ಯಾಹ್ನ 1.30 ರಿಂದ 3.30 ಗಂಟೆ ಸಮಯದಲ್ಲಿ ಗುಜರಿ ವ್ಯಾಪಾರಿಗಳು ಹಿಟಾಚಿ ವಾಹನವನ್ನು ತೆಗೆದುಕೊಂಡು ಹೋದರು ಎಂದರೆ ನನಗೆ ಗೊತ್ತಿಲ್ಲ. ಅದ್ದರಿಂದ ಆರೋಪಿತ ಚಾಸಾ–1 ರವರಿಗೆ ಸೇರಿದ ಹಿಟಾಚಿ ವಾಹನವನ್ನು ತನಗೆ ಸೇರಿದ್ದು ಎಂದು ಮಾರಾಟ ಮಾಡಿ ಮೋಸ ಮಾಡಿದರು ಎಂದರೆ ನನಗೆ ಗೊತ್ತಿಲ್ಲ. ಈ ವಿಚಾರವನ್ನು ಪೊಲೀಸರಿಗೆ ತಿಳಿಸಿ, ಹೇಳಿಕೆಯನ್ನು ನೀಡಿದ್ದೇನೆ ಎಂದರೆ ಸರಿಯಲ್ಲ. ಸಾಕ್ಷಿಯ ಹೇಳಿಕೆಯನ್ನು **ನಿಪಿ.4** ಎಂದು ಗುರುತಿಸಲಾಯಿತು. ಆರೋಪಿತರಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲು: ಆರೋಪಿತರ ಪರ ವಕೀಲರಿಂದಃ** ಇಲ್ಲ.

**ಮರು ವಿಚಾರಣೆಃ** ಇಲ್ಲ.

**ತೆರೆದ ನ್ಯಾಯಾಲಯದಲ್ಲಿ ನನ್ನ ಹೇಳಿಕೆಯಂತೆ ಬೆರಳಚ್ಚು ಮಾಡಲಾಯಿತು**

**ಓದಿ ಹೇಳಿ ಕೇಳಿ ಸರಿ ಇದೆ ಎಂದು ಸಾಕ್ಷಿ ಒಪ್ಪಿಕೊಂಡಿರುತ್ತಾರೆ.**

**ಹೆಚಿ.ನ್ಯಾ ಹಾಗೂ ಪ್ರ.ದ.ನ್ಯಾದಂ.,**

**ಪಿರಿಯಾಪಟ್ಟಣ.**